**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.988/2025.**

ಪಿರ್ಯಾದುದಾರರುಃ- ಸೇಫ ಸ್ಟಾರ್ ಸೌಹಾರ್ದ ಸಹಕಾರಿ ಸಂಘ ನಿಯಮಿತ,
ಶಾಖೆಃ ಮಂಕಿ,
ಪ್ರತಿನಿಧಿಸುವವರು,
ಜೀವನ ಹೊನ್ನಪ್ಪ ನಾಯ್ಕ,
ವಯಸ್ಸು ಸುಮಾರು 38 ವರ್ಷ,
ವೃತ್ತಿಃ ಮ್ಯಾನೇಜರ್,
ಸಾಕೀನಃ ಕರ್ಕಿ, ತಾಃ ಹೊನ್ನಾವರ.

**-ವಿರುದ್ಧ-**

ಆರೋಪಿಯ ಹೆಸರುಃ- ಸುನೀಲ ಲಕ್ಷ್ಮಣ ನಾಯ್ಕ,
ಸಾಕೀನಃ- ಹಕ್ಕಲಕೇರಿ, ಗುಣಂವತೆ,
ತಾಲೂಕುಃ- ಹೊನ್ನಾವರ, (ಉ.ಕ).

****

**ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಲಂ. 351 ರನ್ವಯ ಆರೋಪಿಯ ಹೇಳಿಕೆ.**

ಪ್ರಶ್ನೆಃ 1. ನೀವು ಪಿರ್ಯಾದುದಾರರ ಪರವಾಗಿ ಫ್ರಾಸಾ-1 ರವರ ಹೇಳಿಕೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ- ಕೇಳಿದ್ದೇನೆ

ಪ್ರಶ್ನೆಃ 2. ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಪಿರ್ಯಾದಿಯವರ ಸಂಸ್ಥೆಯಲ್ಲಿ ರೂ.3,50,000/- ಸಾಲವನ್ನು ಪಡೆದುಕೊಂಡಿದ್ದು, ಸ್ದ್ರಿ ಸಾಲದ ಪೈಕಿ ರೂ.3,85,762/- ಕಟ್‌ಬಾಕಿಯಾಗಿದ್ದು, ಸ್ದ್ರಿ ಸಾಲವನ್ನು ಪಿರ್ಯಾದಿಯ ಸಂಸ್ಥೆಯವರು ಮರು ಪಾವತಿಗಾಗಿ ನಿಮ್ಮ ಬಳಿ ಕೇಳಿದಾಗ, ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಹೊನ್ನಾವರ** ಶಾಖೆಯ ನಿಪಿ-1 ರ ಚೆಕ್ ನಂ.764311 ನ್ನು ದಿನಾಂಕ 26-03-2025 ರಂದು ರೂ. 3,85,762/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ

ಹಣ ಸಿಗುತ್ತದೆ ಎಂದು ಭರವಸೆ ನೀಡಿರುತ್ತೀರೆಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 3. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಕೆನರಾ ಬ್ಯಾಂಕ್., ಮಂಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Funds Insufficient' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 26-03-2025 ರಂದು ನಿಪಿ-2ರ ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 4. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 27-03-2025 ರಂದು ನಿಪಿ-3 ರಂತೆ ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ "Refused" ಎಂಬ ಶರಾದೊಂದಿಗೆ ಪಿರ್ಯಾದಿದಾರನ ವಕೀಲರಿಗೆ ದಿನಾಂಕ 29-03-2025 ರಂದು ವಾಪಸ್ಸು ಬಂದಿರುತ್ತದೆ. ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 5. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಿಪಿ-6 ರ ಆಥೋರೈಸೇಷನ್ ಲೆಟರನ್ನು ಹಾಜರುಪಡಿಸಿ ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆ 6: ನಿಮ್ಮ ಪರವಾಗಿ ಏನಾದರೂ ಸಾಕ್ಷಿ ಇದೆಯೇ?

ಆರೋಪಿಯ ಉತ್ತರಃ- ಇದೆ

ಪ್ರಶ್ನೆ 7: ಸದ್ರಿ ಪ್ರಕರಣ ಕುರಿತು ನೀವು ಏನಾದರೂ ಹೇಳುವುದು ಇದೆಯೇ?

ಆರೋಪಿಯ ಉತ್ತರಃ- ಏನು ಇಲ್ಲ

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ)

ಸಹಿ ಇದೆ/-

**ದಿನಾಂಕ 10-12-2025.**

**(ಈರಣ್ಣ ಹುಣಶಿಕಟ್ಟಿ).,**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.ರವರ ನ್ಯಾಯಾಲಯ.,ಹೊನ್ನಾವರ.**

**C/C ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.ರವರ ನ್ಯಾಯಾಲಯ.,ಹೊನ್ನಾವರ.**

****

ಆರೋಪಿಯ ಸಹಿಃ- ಸಹಿ ಇದೆ